# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1047 |
| ಸದಸ್ಯರ ಹೆಸರು: | ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 17.03.2025 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉಚಿತ ಔಷಧ ದೊರಕುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ: | ರಾಜ್ಯದ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉಚಿತ ಔಷಧ ಒದಗಿಸಲು ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ.<br><br>• **ಕೆಎಸ್‌ಎಂಎಸ್‌ಸಿಎಲ್** ಸಂಸ್ಥೆಯಿಂದ ಈವರೆಗೂ 475 ಔಷಧಿಗಳಿಗೆ ಖರೀದಿ ಆದೇಶ ನೀಡಿ ಔಷಧಿಗಳನ್ನು ಎಲ್ಲಾ ಔಷಧಿ ಉಗ್ರಾಣಗಳಿಗೆ ಸರಬರಾಜು ಮಾಡಲಾಗಿರುತ್ತದೆ. (Essential Drug-262 ಮತ್ತು Desirable Drug-213).<br>• ಪ್ರಸ್ತುತ ಖರೀದಿಗೊಂಡ ಔಷಧಿಗಳಲ್ಲಿ ಜಿಲ್ಲಾ ಔಷಧ ಉಗ್ರಾಣದಲ್ಲಿ ಸುಮಾರು 344 ಔಷಧಗಳ ದಾಸ್ತಾನು ಲಭ್ಯತೆ ಇರುವುದು ಕಂಡುಬಂದಿರುತ್ತದೆ.<br>• ಉಗ್ರಾಣಕ್ಕೆ ಸರಬರಾಜುಗೊಂಡು ಆರೋಗ್ಯ ಸಂಸ್ಥೆಗಳ ಬೇಡಿಕೆಯಂತೆ ವಿತರಿಸಲಾಗಿ ಕೆಲವು ಔಷಧಿಗಳ ದಾಸ್ತಾನು ಕೊರತೆ ಆಗಿರುವುದು ಕಂಡುಬಂದಿರುತ್ತದೆ. (131 ಔಷಧಿಗಳಲ್ಲಿ Essential-91, Desirable-40).<br>• ಪ್ರಸ್ತುತ ಖರೀದಿಗೊಂಡು ಜಿಲ್ಲಾ ಔಷಧ ಉಗ್ರಾಣಗಳಿಂದ ಆರೋಗ್ಯ ಸಂಸ್ಥೆಗಳಿಗೆ ವಿತರಣೆ ನಂತರ ಔಷಧಗಳ ದಾಸ್ತಾನು ಕಡಿಮೆ ಆಗಿರುವ ಔಷಧಗಳಿಗೆ ಹಾಗೂ ಖರೀದಿಯಾಗದೇ ಇರುವ ಔಷಧಗಳಿಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು:<br>ಕಳೆದ 3 ವರ್ಷದ ಅವಧಿಯಲ್ಲಿ ಔಷಧ ಖರೀದಿಗಾಗಿ ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ: | ರಾಜ್ಯದ ಜಿಲ್ಲಾ ಔಷಧ ಉಗ್ರಾಣಗಳಲ್ಲಿ ಔಷಧಿಗಳ ಲಭ್ಯತೆಗಾಗಿ ಕೈಗೊಂಡ ಕ್ರಮಗಳು ಈ ಕೆಳಕಂಡಂತಿದೆ.<br><br>2022-23 ವರ್ಷದ ವಾರ್ಷಿಕ ಬೇಡಿಕೆಯಲ್ಲಿನ ಕೆಲವು Essential drug list (EDL) ಮತ್ತು Desirable drug list (DDL)ಗಳಲ್ಲಿ ಔಷಧಿಗಳ ಕೊರತೆ ಇರುವುದರಿಂದ ಹಾಗೂ 2025-26ನೇ ಸಾಲಿನ ಆರ್ಥಿಕ ವರ್ಷಕ್ಕಾಗಿ ಆರೋಗ್ಯ ಸಂಸ್ಥೆಗಳ ವಾರ್ಷಿಕ indent ಅನ್ನು ಪಡೆದು ಅಗತ್ಯ ಮೌಲ್ಯಮಾಪನ ಸಮಿತಿಯು (Need assessment committee) 1094 ರಾಜ್ಯದ ಅಗತ್ಯ ಔಷಧಿಗಳ ಖರೀದಿಗೆ ಅನುಮೋದಿಸಿದ್ದು, ಖರೀದಿ ಪ್ರಕ್ರಿಯೆಗೆ ಬಜೆಟ್ ಅನುಮೋದನೆ ಪ್ರಕ್ರಿಯೆಯಲ್ಲಿದೆ.<br><br>• ಪ್ರಸ್ತುತ ಆರೋಗ್ಯ ಸಂಸ್ಥೆಗಳು, ತುರ್ತು ಸಂದರ್ಭದಲ್ಲಿ ಅಗತ್ಯ ಪ್ರಮಾಣದಲ್ಲಿ ಔಷಧಗಳನ್ನು ತಮ್ಮ ಮಟ್ಟದಲ್ಲಿ ಸೂಕ್ತ ಪ್ರಾಧಿಕಾರದ ಅನುಮೋದನೆಯೊಂದಿಗೆ ಸ್ಥಳೀಯವಾಗಿ ರಾಷ್ಟ್ರೀಯ ಉಚಿತ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಸಂಸ್ಥೆಗೆ ಬಿಡುಗಡೆಯಾಗುವ ಅನುದಾನದಲ್ಲಿ, Abark/ARS/NFDS/15th Finance Commission ಅನುದಾನಗಳಲ್ಲಿ ನಿಯಮಾನುಸಾರ ಸೂಕ್ತ ಪ್ರಾಧಿಕಾರದ ಅನುಮೋದನೆಯೊಂದಿಗೆ ಆರೋಗ್ಯ ಸಂಸ್ಥೆಗಳು ಕೊರತೆ ಔಷಧಿಗಳನ್ನು ಅಗತ್ಯ ಪ್ರಮಾಣದಲ್ಲಿ ಖರೀದಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಆರೋಗ್ಯ ಸಂಸ್ಥೆಗಳ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ.<br>• ತ್ವರಿತವಾಗಿ ಅವಶ್ಯವಿರುವ ಔಷಧಿಗಳನ್ನು ಖರೀದಿಸಲು ಕೆಎಸ್‌ಎಂಎಸ್‌ಸಿಎಲ್ ಹಿಂದಿನ ಸರಬರಾಜುದಾರರಿಂದ 25% ಹೆಚ್ಚುವರಿ ಪ್ರಮಾಣದಲ್ಲಿ ಖರೀದಿಸಲು ಕ್ರಮವಹಿಸಲಾಗುತ್ತಿದೆ ಹಾಗೂ 23 ಔಷಧಿಗಳನ್ನು 4G exemption ಮೂಲಕ KAPL (ಕರ್ನಾಟಕ ಆಂಟಿಬಯೋಟಿಕ್ಸ್ ಅಂಡ್ ಫಾರ್ಮಾಸ್ಯೂಟಿಕಲ್ಸ್ |

ಲಿಮಿಟೆಡ್)ನಿಂದ ಒಟ್ಟು ರೂ.9.50 ಕೋಟಿ ಮೌಲ್ಯದ ಔಷಧಿಗಳನ್ನು ಖರೀದಿಸಲು ಪ್ರಸ್ತಾವನೆ ಪ್ರಕ್ರಿಯೆಯಲ್ಲಿರುತ್ತದೆ.

- ಕಳೆದ 2 ವರ್ಷಗಳ ಅವಧಿಯಲ್ಲಿ ಔಷಧ ಖರೀದಿಗಾಗಿ ಕೆಎಸ್‌ಎಂಎಸ್‌ಸಿಎಲ್ ಸಂಸ್ಥೆಗೆ, ಸರ್ಕಾರಿ ಆದೇಶ ಸಂಖ್ಯೆ: HFW/141/FPR/2022-23, ದಿನಾಂಕ: 19.12.2022 ರಂತೆ, ರೂ.629.90 ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ.

ಬಾಕಿ ಇರುವ ಔಷಧಿಗಳನ್ನು ಕೆಳಕಂಡಂತೆ ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಔಷಧಿಗಳ ಲಭ್ಯತೆ ಕಾಪಾಡಲು ಜಿಲ್ಲಾವಾರು ಅನುದಾನ ಹಂಚಿಕೆ ಮಾಡಲಾಗಿರುತ್ತದೆ.

| Unit cost wise Details 2022-23 | | |
|---|---|---|
| **Sl. No** | **Facilities** | **Total Amount release per Facility ( in Rs.)** |
| 1 | Sub Centre | 20,000/- |
| 2 | Primary Health Centres | 41,783/- |
| 3 | Community Health Centers | 73,791/- |
| 4 | Taluka Hospital | 2,05,000/- |
| 5 | District Hospital | 3,60,000/- |
| 6 | State Level Hospital | 5,76,000/- |

ಮೇಲಿನ ಕೋಷ್ಟಕದಲ್ಲಿ ತಿಳಿಸಿದಂತೆ, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಮಾರ್ಗಸೂಚಿ ಅನ್ವಯ ಶೇ 20% ರಷ್ಟು ಅನುದಾನವನ್ನು ರಾಜ್ಯದ ಆರೋಗ್ಯ ಸಂಸ್ಥೆಗಳಿಗೆ (ಜಿಲ್ಲಾ ಆಸ್ಪತ್ರೆ, ತಾಲ್ಲೂಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ) ಸ್ಥಳೀಯವಾಗಿ ಅಗತ್ಯ ಔಷಧಿಗಳನ್ನು ಖರೀದಿಸಲು ಆರೋಗ್ಯ ಸಂಸ್ಥೆಗಳಿಗೆ ಅನುದಾನವನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಒಟ್ಟು **ರೂ.1877/- ಲಕ್ಷಗಳನ್ನು** ಜಿಲ್ಲಾವಾರು ಹಂಚಿಕೆ ಮಾಡಲಾಗಿರುತ್ತದೆ ಹಾಗೂ ರೂ.1800/- ಲಕ್ಷಗಳ ಅನುದಾನವನ್ನು ಔಷಧಿಗಳನ್ನು ಸ್ಥಳೀಯವಾಗಿ ಫಲಾನುಭವಿಗಳಿಗೆ ನೀಡುವ ಸಲುವಾಗಿ ವೆಚ್ಚ ಮಾಡಲಾಗಿರುತ್ತದೆ.

| Unit cost wise Details 2023-24 | | |
|---|---|---|
| **ಕ್ರಮ ಸಂಖ್ಯೆ** | **ಸಂಸ್ಥೆಯ ಹೆಸರು** | **ಪ್ರತಿ ಸಂಸ್ಥೆವಾರು ವಾರ್ಷಿಕ ಅನುದಾನ ಹಂಚಿಕೆ ರೂ. ಗಳಲ್ಲಿ** |
| 1 | ಉಪ ಕೇಂದ್ರ | 17,595 |
| 2 | ಪ್ರಾಥಮಿಕ ಆರೋಗ್ಯ ಕೇಂದ್ರ | 61,697 |
| 3 | ಸಮುದಾಯ ಆರೋಗ್ಯ ಕೇಂದ್ರ | 72,705 |
| 4 | ತಾಲ್ಲೂಕ ಆಸ್ಪತ್ರೆ | 1,98,560 |
| 5 | ಜಿಲ್ಲಾ ಆಸ್ಪತ್ರೆ | 3,92,727 |

ಮೇಲಿನ ಕೋಷ್ಟಕದಲ್ಲಿ ವಿವರಿಸಿರುವಂತೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಆರ್ಥಿಕ ಸಾಲು-2023-24 ರಲ್ಲಿ ಒಟ್ಟು **ರೂ.3103.80/-** ಲಕ್ಷಗಳ ಅನುದಾನವನ್ನು ಜಿಲ್ಲಾವಾರು ಹಂಚಿಕೆ ಮಾಡಲಾಗಿರುತ್ತದೆ. ಸದರಿ ಅನುದಾನದಲ್ಲಿ ಈಗಾಗಲೇ ರಾಜ್ಯದಲ್ಲಿ **ರೂ.3003/-** ಲಕ್ಷಗಳ ಅನುದಾನವನ್ನು ಔಷಧಿಗಳನ್ನು ಸ್ಥಳೀಯವಾಗಿ ಫಲಾನುಭವಿಗಳಿಗೆ ನೀಡುವ

ಸಲುವಾಗಿ ವೆಚ್ಚ ಮಾಡಲಾಗಿರುತ್ತದೆ.

**Unit cost wise Details 2024-25**

| Sl. No | Facilities | Total Amount release per Facility ( in Rs.) |
|---|---|---|
| 1 | Sub Centre | 9,600/- |
| 2 | Primary Health Centres | 36,000/- |
| 3 | Community Health Centers | 72,000/- |
| 4 | Taluka Hospital | 1,20,000/- |
| 5 | District Hospital | 1,92,000/- |
| 6 | State Level Hospital | 1,92,000/- |

ಮೇಲಿನ ಕೋಷ್ಟಕದಲ್ಲಿ ತಿಳಿಸಿದಂತೆ, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಮಾರ್ಗಸೂಚಿ ಅನ್ವಯ ಶೇ 20% ರಷ್ಟು ಅನುದಾನವನ್ನು ರಾಜ್ಯದ ಆರೋಗ್ಯ ಸಂಸ್ಥೆಗಳಿಗೆ (ಜಿಲ್ಲಾ ಆಸ್ಪತ್ರೆ, ತಾಲ್ಲೂಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ) ಸ್ಥಳೀಯವಾಗಿ ಅಗತ್ಯ ಔಷಧಿಗಳನ್ನು ಖರೀದಿಸಲು ಆರೋಗ್ಯ ಸಂಸ್ಥೆಗಳಿಗೆ ಅನುದಾನವನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಒಟ್ಟು **ರೂ.1818.24 ಲಕ್ಷಗಳನ್ನು** ಜಿಲ್ಲಾವಾರು ಹಂಚಿಕೆ ಮಾಡಲಾಗಿರುತ್ತದೆ.

| | | |
|---|---|---|
| ಇ) | ವೈದ್ಯರು ರೋಗಿಗಳಿಗೆ ಖಾಸಗಿ ಪ್ರಯೋಗಾಲಯಗಳಲ್ಲಿ ಪರೀಕ್ಷೆ ಹಾಗೂ ಔಷಧಿಗಳನ್ನು ಖರೀದಿಸಲು ಚೀಟಿಗಳನ್ನು ಬರೆದುಕೊಡಲು ಸರ್ಕಾರ ನಿಯಮದಡಿಯಲ್ಲಿ ಅವಕಾಶ ಇದೆಯೇ: ಈ ಪ್ರಕರಣದಡಿಯಲ್ಲಿ ಎಷ್ಟು ವೈದ್ಯರ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ: | ವೈದ್ಯರು ರೋಗಿಗಳಿಗೆ ಖಾಸಗಿ ಪ್ರಯೋಗಾಲಯಗಳಲ್ಲಿ ಪರೀಕ್ಷೆ ಹಾಗೂ ಔಷಧಿಗಳನ್ನು ಖರೀದಿಸಲು ಚೀಟಿಗಳನ್ನು ಬರೆದುಕೊಡಲು ಸರ್ಕಾರದ ನಿಯಮದಡಿಯಲ್ಲಿ ಅವಕಾಶವಿರುವುದಿಲ್ಲ. ಈ ಬಗ್ಗೆ NFDS ವಿಭಾಗಕ್ಕೆ ಯಾವುದೇ ದೂರು ಬಂದಿರುವುದಿಲ್ಲ. |
| ಈ) | ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಅವರಲ್ಲಿ ಹಣವಿಲ್ಲದೇ ಇರುವುದರಿಂದ ಸರ್ಕಾರಿ ಆಸ್ಪತ್ರೆಗಳಿಗೆ ಹೋಗಲು ಭಯಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿರುವುದಿಲ್ಲ.<br>ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ಸರ್ಕಾರಿ ಆಸ್ಪತ್ರೆಗಳಿಗೆ ಚಿಕಿತ್ಸೆ ಪಡೆಯಲು ಸರ್ಕಾರವು ಸೂಕ್ತ ಕ್ರಮಗಳನ್ನು ಕೈಗೊಂಡು ಸಾರ್ವಜನಿಕರಿಗೆ ಉಚಿತವಾಗಿ ಚಿಕಿತ್ಸೆ ಸೇವೆಗಳನ್ನು ಪಡೆಯಲು ಅನುವು ಮಾಡಿಕೊಟ್ಟಿರುತ್ತದೆ. |
| ಉ) | ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ದಿಢೀರ್ ಭೇಟಿ ನೀಡಿ ಪರಿಶೀಲಿಸಲಾಗಿರುತ್ತದೆ? (ಜಿಲ್ಲೆಗಳ ಮಾಹಿತಿ ಒದಗಿಸುವುದು) | ಎಲ್ಲಾ ವಿಭಾಗೀಯ ಸಹ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಒಳಗೊಂಡಂತೆ ಜಿಲ್ಲಾ ನೋಡಲ್ ಅಧಿಕಾರಿಗಳು, ಜಿಲ್ಲಾಮಟ್ಟದ ಎಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ತಮ್ಮ ಅಧೀನ ಆರೋಗ್ಯ ಸಂಸ್ಥೆಗಳಿಗೆ ನಿಯಮಿತವಾಗಿ ಭೇಟಿ ನೀಡುತ್ತಿದ್ದು, ಉಗ್ರಾಣವನ್ನು ಒಳಗೊಂಡಂತೆ ಎಲ್ಲಾ ರೀತಿಯ ಪರಿಶೀಲನೆಯನ್ನು ಮಾಡಲಾಗುತ್ತಿದೆ. |

**ಆಕುಕ 30 ಎಸ್‌ಟಿ ಕ್ಯೂ 2025**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು